## ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಮುಂಡರಗಿ

**ಸಿ.ಸಿ ನಂಃ 543/2023**

| | | |
|---|---|---|
| ಸಾಕ್ಷಿಯ ಹೆಸರುಃ | ಗುರುರಾಜ | ಪ್ರಾಸಾಃ **06** |
| ತಂದೆ/ಗಂಡನ ಹೆಸರುಃ | ಭರಮರೆಡ್ಡಿ | ಚಾಸಾಃ **07** |
| ವಯಸ್ಸುಃ | **26** ವರ್ಷ | ದಿಃ **23.06.2026** |
| ಉದ್ಯೋಗಃ | ವ್ಯಾಸಂಗ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಬೆಣೆಹಳ್ಳಿ | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನನಗೆ ಚಾಸಾ. 6 ರವರ ಮತ್ತು ಆರೋಪಿತರ ಪರಿಚಯ ಇರುವುದಿಲ್ಲ. ಘಟನೆಯ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ.

(ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋದಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸಹಾಯಕ ಸರಕಾರಿ ಅಭಿಯೋಜಕರು ಭಿನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾಗ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು.)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿಃ 06.05.2023 ರಂದು ಸಾ. 04.30 ರಿಂದ 05.30 ಗಂಟೆಯವರೆಗೆ ಪೋಲಿಸರು ನನ್ನ ಚಾಸಾ.6 ರವರ ಸಮಕ್ಷಮ ಅಪಘಾತದಲ್ಲಿ ಮೃತನಾದ ನಾಗರಾಜನ ಶವ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಗೆ ಪಂಚನಾಮೆ ಹಾಗೂ ಪೋಟೋಗಳನ್ನು ಅವುಗಳನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ನಿಪಿ- 9 ಮತ್ತು 13 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-9(ಬಿ) ಎಂದು ಗುರುತಿಸಲಾಯಿತು. ಆರೋಪಿತನಿಗೆ ಸಹಾಯ ಮಾಡಲು ನಾನು ಸುಳ್ಳುಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು   ಆರೋಪಿತರ ಪರಃ ವಕೀಲರವರಿಂದಃ

ಯಾವುದೇ ಪಾಟೀ ಸವಾಲು ಇರುವುದಿಲ್ಲ.

ಮರುವಿಚಾರಣೆ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಜೆಎಂಎಫ್‌ಸಿ ನ್ಯಾಯಾಧೀಶರು
ಮುಂಡರಗಿ